# CMRIT STUDENT BAGS TWO GOLD MEDALS

**Publication: Sanjevani**
**Date: 16-02-2021 Page 04**

## ಬಾಕ್ಸಿಂಗ್‌ನಲ್ಲಿ ಪ್ರಿಯಾಂಕಗೆ 2 ಚಿನ್ನದ ಪದಕ




ಮೈಸೂರಿನಲ್ಲಿ ನಡೆದ ಕಿಕ್‌ಬಾಕ್ಸಿಂಗ್ ಚಾಂಪಿಯನ್ಸ ಶಿಪ್‌ನಲ್ಲಿ ಬೆಂಗಳೂರಿನ ಸಿ ಎಂ ಆರ್ ತಾಂತ್ರಿಕ ಮಹಾವಿದ್ಯಾಲಯದ ವಿದ್ಯಾರ್ಥಿನಿ ಎಲ್. ಪ್ರಿಯಾಂಕ ರೆಡ್ಡಿ ಎರಡು ಚಿನ್ನದ ಪದಕಗಳನ್ನು ಮುಡಿಗೇರಿಸಿ ಕೊಂಡಿದ್ದಾರೆ.

ಬೆಂಗಳೂರು, ಫೆ.16 – ನಗರದ ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯದ ವಿದ್ಯಾರ್ಥಿನಿ ಎಲ್. ಪ್ರಿಯಾಂಕ ರೆಡ್ಡಿ ಇತ್ತೀಚೆಗೆ ನಡೆದ 12ನೇ ಕರ್ನಾಟಕ ರಾಜ್ಯ ಕಿಕ್ ಬಾಕ್ಸಿಂಗ್ ಚಾಂಪಿಯನ್ ಶಿಪ್‌ನಲ್ಲಿ ಎರಡು ಚಿನ್ನದ ಪದಕ ಮುಡಿಗೇರಿಸಿಕೊಂಡಿದ್ದಾರೆ. ಮೈಸೂರು ಜಿಲ್ಲಾ ಕಿಕ್ ಬಾಕ್ಸಿಂಗ್ ಅಸೋಶಿಯೇಷನ್ ಹಾಗೂ ಕರ್ನಾಟಕ ಕಿಕ್ ಬಾಕ್ಸಿಂಗ್ ಅಸೋಶಿಯೇಷನ್ ಸಹಯೋಗದಲ್ಲಿ ಮೈಸೂರಿನಲ್ಲಿ ನಡೆದ ರಾಜ್ಯಮಟ್ಟದ ಕಿಕ್‌ಬಾಕ್ಸ್ ಚಾಂಪಿಯನ್ ಶಿಪ್ ಸ್ಪರ್ಧೆಯಲ್ಲಿ ಬೆಂಗಳೂರನ್ನು ಪ್ರತಿನಿಧಿಸಿದ್ದ ಎಲ್. ಪ್ರಿಯಾಂಕ ರೆಡ್ಡಿ –55 ಜೂನಿಯರ್ ಟಟಾಮಿ ಮತ್ತು ರಿಂಗ್ ವಿಭಾಗದಲ್ಲಿ ಎರಡು ಚಿನ್ನದ ಪದಕ ಗೆದ್ದು ಬೀಗಿದ್ದಾರೆ.

ಕಿಕ್ ಲೈಟ್ –55 ಕೆ.ಜಿ. ವಿಭಾಗದಲ್ಲಿ ನಡೆದ ಚಾಂಪಿಯನ್ ಶಿಪ್ ಸ್ಪರ್ಧೆಯಲ್ಲಿ ವಿವಿಧ ರಾಜ್ಯಗಳಿಂದ 250 ಪ್ರತಿನಿಧಿಗಳು ಭಾಗವಹಿಸಿದ್ದರು. 3–0 ಅಂತರದಲ್ಲಿ ಎದುರಾಳಿಯನ್ನು ಮಣಿಸುವ ಮೂಲಕ ಎರಡು ವಿಭಾಗದಲ್ಲೂ ಚಿನ್ನದ ಪದಕವನ್ನು ತಮ್ಮದಾಗಿಸಿಕೊಂಡಿದ್ದಾರೆ. ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಎಂಜಿನಿಯರಿಂಗ್ ಮಾಡುತ್ತಿರುವ ಎಲ್. ಪ್ರಿಯಾಂಕ ರೆಡ್ಡಿ ಸಾಧನೆಯನ್ನು ಕಾಲೇಜಿನ ಪ್ರಾಂಶುಪಾಲರಾದ ಡಾ. ಸಂಜಯ್ ಜೈನ್ ಹಾಗೂ ಕಾಲೇಜಿನ ಆಡಳಿತ ಮಂಡಳಿ ಮನದುಂಬಿ ಶ್ಲಾಘಿಸಿದ್ದಾರೆ.

ವಿಶ್ವದಾದ್ಯ

Pg 04

**Publication: Prajavani**
**Date: 17-02-2021 Page 04**

ಪ್ರಜಾವಾಣಿ

## ಎರಡು ಚಿನ್ನದ ಪದಕ ಗೆದ್ದ ಪ್ರಿಯಾಂಕಾ



ಎಲ್.ಪ್ರಿಯಾಂಕ ರೆಡ್ಡಿ

ಬೆಂಗಳೂರು: ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯದ ವಿದ್ಯಾರ್ಥಿನಿ ಎಲ್. ಪ್ರಿಯಾಂಕಾ ರೆಡ್ಡಿ ಅವರು ರಾಜ್ಯ ಕಿಕ್ ಬಾಕ್ಸಿಂಗ್ ಚಾಂಪಿಯನ್‌ಷಿಪ್‌ನಲ್ಲಿ ಎರಡು ಚಿನ್ನದ ಪದಕಗಳನ್ನು ಜಯಿಸಿದ್ದಾರೆ.

ಮೈಸೂರು ಜಿಲ್ಲಾ ಕಿಕ್ ಬಾಕ್ಸಿಂಗ್ ಸಂಸ್ಥೆ ಹಾಗೂ ಕರ್ನಾಟಕ ಕಿಕ್ ಬಾಕ್ಸಿಂಗ್ ಸಂಸ್ಥೆಗಳ ಸಹಯೋಗದಲ್ಲಿ ಮೈಸೂರಿನ ಯುವರಾಜ ಕಾಲೇಜಿನ ಒಳಾಂಗಣ ಕ್ರೀಡಾಂಗಣದಲ್ಲಿ ಚಾಂಪಿಯನ್‌ಷಿಪ್ ಆಯೋಜನೆಯಾಗಿತ್ತು.